## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2012-13ನೇ ಸಾಲಿನಿಂದ ಸಾಮಾನ್ಯ ಭವಿಷ್ಯ ನಿಧಿ ಖಾತೆಯಲ್ಲಿ ಜಮೆಯಾಗಿರುವ ಮೊತ್ತದ ವಿವರಗಳ ಮಾಹಿತಿಯನ್ನು ಖಾತೆದಾರರು ವೆಬ್‌ಸೈಟ್ ಮೂಲಕ ಪಡೆಯುವ ಬಗ್ಗೆ.

ಓದಲಾಗಿದೆ:
1. ಹಿರಿಯ ಉಪ ಮಹಾಲೇಖಪಾಲರು (ಫಂಡ್ಸ್)ರವರ ಅರೆ ಸರ್ಕಾರಿ ಪತ್ರ ಸಂಖ್ಯೆ: FM(C)/G3/2012-13/38, ದಿನಾಂಕ:09.01.2013.
2. ಸರ್ಕಾರದ ಪತ್ರ ಸಂಖ್ಯೆ: ಎಫ್.ಡಿ/1889/ಮುಂಗಡ/2013, ದಿನಾಂಕ:31.05.2013.
3. ಹಿರಿಯ ಉಪ ಮಹಾಲೇಖಪಾಲರು (ಫಂಡ್ಸ್)ರವರ ಪತ್ರ ಸಂಖ್ಯೆ: FM(C)/G1/2013-14/49, ದಿನಾಂಕ:19.06.2013.

<u>ಪ್ರಸ್ತಾವನೆ:</u>

ಮಾಹಿತಿ ಮತ್ತು ಸಂವಹನ ತಂತ್ರಜ್ಞಾನವನ್ನು (Information and Communication Technology) ಬಳಸಿ ರಾಜ್ಯ ಸರ್ಕಾರಿ ನೌಕರರ ಸಾಮಾನ್ಯ ಭವಿಷ್ಯ ನಿಧಿ ಖಾತೆಗಳ ಲೆಕ್ಕಗಳನ್ನು ಸಮರ್ಥವಾಗಿ ಮತ್ತು ಪಾರದರ್ಶಕವಾಗಿ ರೂಪಿಸಲು ಪೂರಕ ಕ್ರಮಗಳನ್ನು ಮಹಾಲೇಖಪಾಲರ ಕಛೇರಿಯು ಕೈಗೊಂಡಿದೆ. ಇದರ ಭಾಗವಾಗಿ ಸಾಮಾನ್ಯ ಭವಿಷ್ಯ ನಿಧಿ ಖಾತೆಯಲ್ಲಿ ಜಮೆಯಾಗಿರುವ ಮೊತ್ತದ ವಿವರಗಳನ್ನು ಒಳಗೊಂಡಿರುವ ವಾರ್ಷಿಕ ತಃಖ್ತೆಯನ್ನು ನೀಡುವ ಪ್ರಸ್ತುತ ಪದ್ಧತಿಯನ್ನು ಕೈಬಿಟ್ಟು, 2012-13ನೇ ಸಾಲಿನಿಂದ ಖಾತೆಯಲ್ಲಿ ಜಮೆಯಾಗಿರುವ ಮೊತ್ತದ ಮಾಹಿತಿಯನ್ನು ಖಾತೆದಾರರು ನೇರವಾಗಿ ವೆಬ್‌ಸೈಟ್ ಮೂಲಕ ಪಡೆಯುವ ಬಗ್ಗೆ ಸರ್ಕಾರದ ಅನುಮೋದನೆ ನೀಡುವಂತೆ ಮೇಲೆ ಕ್ರ.ಸಂ (1)ರಲ್ಲಿ ಓದಲಾದ ಅರೆ ಸರ್ಕಾರಿ ಪತ್ರದಲ್ಲಿ ಕೋರಲಾಗಿದೆ.

ಸಾಮಾನ್ಯ ಭವಿಷ್ಯ ನಿಧಿ ಖಾತೆಯಲ್ಲಿ ಜಮೆಯಾಗಿರುವ ಮೊತ್ತದ ವಾರ್ಷಿಕ ತಃಖ್ತೆಯನ್ನು ನೀಡುವ ಪ್ರಸ್ತುತ ಪದ್ಧತಿಯನ್ನು ಕೈಬಿಟ್ಟು, ಈ ಮೊತ್ತದ ಮಾಹಿತಿಯನ್ನು 2012-13ನೇ ಸಾಲಿನಿಂದ ಖಾತೆದಾರರು ನೇರವಾಗಿ ವೆಬ್‌ಸೈಟ್ ಮೂಲಕ ಪಡೆದುಕೊಳ್ಳಲು ಸರ್ಕಾರ ನಿರ್ಣಯಿಸಿರುವ ಬಗ್ಗೆ ಮೇಲೆ ಕ್ರ.ಸಂ (2)ರಲ್ಲಿ ಓದಲಾದ ಸರ್ಕಾರಿ ಪತ್ರದಲ್ಲಿ ಮಹಾಲೇಖಪಾಲರ ಕಛೇರಿಗೆ ತಿಳಿಸಲಾಗಿದೆ.

ಸಾಮಾನ್ಯ ಭವಿಷ್ಯ ನಿಧಿ ಖಾತೆದಾರರು 2012-13ನೇ ಸಾಲಿನಿಂದ ಖಾತೆಯಲ್ಲಿ ಜಮೆಯಾಗಿರುವ ಮೊತ್ತದ ಬಗ್ಗೆ ಮಾಹಿತಿಯನ್ನು http://www.agkar.gov.in ವೆಬ್‌ಸೈಟ್‌ನಿಂದ download ಮಾಡಿಕೊಳ್ಳಲು ಅವಕಾಶವಿದೆಯೆಂದು ಮಹಾಲೇಖಪಾಲರ ಕಛೇರಿಯು ಮೇಲೆ ಕ್ರ.ಸಂ (3)ರಲ್ಲಿ ಓದಲಾದ ಪತ್ರದಲ್ಲಿ ತಿಳಿಸಿರುತ್ತಾರೆ.

ಕರ್ನಾಟಕ ಸಾಮಾನ್ಯ ಭವಿಷ್ಯ ನಿಧಿ ನಿಯಮಗಳು, 1957ರ ನಿಯಮ 30ರಲ್ಲಿ ಪ್ರತಿ ವರ್ಷ ಮುಕ್ತಾಯಗೊಂಡ ನಂತರ ಲೆಕ್ಕಾಧಿಕಾರಿಯು ಆದಷ್ಟು ಶೀಘ್ರವಾಗಿ ಪ್ರತಿಯೊಬ್ಬ ಚಂದಾದಾರನಿಗೆ ನಿಧಿಯಲ್ಲಿ ವರ್ಷದ 1ನೇ ಏಪ್ರಿಲ್‌ವರೆಗೆ ಇರುವ ಶಿಲ್ಕಿನ ಮೊಬಲಗು, ವರ್ಷದಲ್ಲಿ ಜಮೆ ಅಥವಾ ಕಳೆದುಕೊಂಡ ಒಟ್ಟು ಮೊಬಲಗು, ವರ್ಷದ 31ನೇ ಮಾರ್ಚ್‌ವರೆಗೆ ಜಮೆ ಮಾಡಲಾದ ಬಡ್ಡಿಯ ಒಟ್ಟು ಮೊಬಲಗನ್ನು ಮತ್ತು ಆ ದಿನಾಂಕದವರೆಗೆ ಮುಕ್ತಾಯದ ಶಿಲ್ಕನ್ನು ತೋರಿಸುವ ಅವರ ಖಾತೆಯ ವಿವರಣೆಗಳನ್ನು ಕಳುಹಿಸತಕ್ಕದ್ದೆಂದು ತಿಳಿಸಲಾಗಿದೆ.

.... 2

ಸಾಮಾನ್ಯ ಭವಿಷ್ಯ ನಿಧಿ ಖಾತೆಯಲ್ಲಿ ಜಮೆಯಾಗಿರುವ ಮೊತ್ತದ ವಿವರಗಳನ್ನು ಒಳಗೊಂಡಿರುವ ವಾರ್ಷಿಕ ತಃಖ್ತೆಯನ್ನು ನೀಡುವ ಪ್ರಸ್ತುತ ಪದ್ಧತಿಯನ್ನು ಕೈಬಿಟ್ಟು, ಖಾತೆಯಲ್ಲಿ ಜಮೆಯಾಗಿರುವ ಮೊತ್ತದ ಬಗ್ಗೆ ಮಾಹಿತಿಯನ್ನು 2012-13ನೇ ಸಾಲಿನಿಂದ ಖಾತೆದಾರರು ನೇರವಾಗಿ ವೆಬ್‌ಸೈಟ್ ಮೂಲಕ ಪಡೆದುಕೊಳ್ಳಲು ಸರ್ಕಾರ ಈಗಾಗಲೇ ನಿರ್ಣಯಿಸಿರುವುದರಿಂದ ಈ ಮುಂದಿನಂತೆ ಆದೇಶಿಸಲಾಗಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಆಇ 26 ಮುಭನಿ 2013, ಬೆಂಗಳೂರು, ದಿನಾಂಕ:20.08.2013.</u>**

ಸಾಮಾನ್ಯ ಭವಿಷ್ಯ ನಿಧಿ ಖಾತೆಯಲ್ಲಿ ಜಮೆಯಾಗಿರುವ ಮೊತ್ತದ ವಿವರಗಳನ್ನು ಒಳಗೊಂಡಿರುವ ವಾರ್ಷಿಕ ತಃಖ್ತೆಯನ್ನು ಮಹಾಲೇಖಪಾಲರ ಕಛೇರಿ ನೀಡುತ್ತಿರುವ ಪ್ರಸ್ತುತ ಪದ್ಧತಿಯನ್ನು ಕೈಬಿಟ್ಟು, ಖಾತೆಯಲ್ಲಿ ಜಮೆಯಾಗಿರುವ ಮೊತ್ತದ ಬಗ್ಗೆ ಮಾಹಿತಿಯನ್ನು 2012-13ನೇ ಸಾಲಿನಿಂದ ಖಾತೆದಾರರು ನೇರವಾಗಿ http://www.agkar.gov.in ವೆಬ್‌ಸೈಟ್ ಮೂಲಕ ಪಡೆದುಕೊಳ್ಳಲು ಸರ್ಕಾರ ಅನುಮತಿ ನೀಡಿ ಆದೇಶಿಸಿದೆ.

ಕರ್ನಾಟಕ ಸಾಮಾನ್ಯ ಭವಿಷ್ಯ ನಿಧಿ ನಿಯಮಗಳು, 1957ಕ್ಕೆ ಅಗತ್ಯ ತಿದ್ದುಪಡಿ ಆದೇಶವನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯ ಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,

(ಎನ್. ಲಕ್ಷ್ಮಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಆಡಳಿತ ಮತ್ತು ಮುಂಗಡಗಳು)

20/8/2013

ಇವರಿಗೆ:
ಸಂಕಲನಕಾರರು, ರಾಜ್ಯ ಪತ್ರ, ಬೆಂಗಳೂರು - ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಲು ಮತ್ತು 100 ಪ್ರತಿಗಳನ್ನು ಆರ್ಥಿಕ ಇಲಾಖೆ (ಮುಂಗಡ) ಕಳುಹಿಸಿಕೊಡುವಂತೆ ಕೋರಲಾಗಿದೆ.

ಪ್ರತಿಯನ್ನು:

1. ಮಹಾಲೇಖಪಾಲರು (ಲೆಕ್ಕಪತ್ರ & ತನಿಖೆ), ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯದರ್ಶಿಗಳು, ಅಪರ ಮುಖ್ಯ ಕಾರ್ಯದರ್ಶಿಗಳು, ಅಮುಕಾ ಮತ್ತು ಅಭಿವೃದ್ಧಿ ಅಧಿಕಾರಿಗಳು, ವಿಧಾನಸೌಧ, ಬೆಂಗಳೂರು,
3. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು,
4. ಘನತೆವೆತ್ತ ರಾಜ್ಯಪಾಲರ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು,
5. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು,
6. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು,
7. ಪ್ರಧಾನ ಕಾರ್ಯದರ್ಶಿ, ಕರ್ನಾಟಕ ವಿಧಾನ ಮಂಡಲ, ಬೆಂಗಳೂರು,
8. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಕೋರಮಂಗಲ, ಬೆಂಗಳೂರು,
9. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು,
10. ಎಲ್ಲಾ ಇಲಾಖಾ ಮುಖ್ಯಸ್ಥರುಗಳು,
11. ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತಿಯ ಎಲ್ಲಾ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು,
12. ಆರ್ಥಿಕ ಇಲಾಖೆಯ ಗಣಕ ಕೋಶ-ಆರ್ಥಿಕ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು,
13. ಬಿಡಿ ಪ್ರತಿಗಳು/ಶಾಖಾ ರಕ್ಷಕ ಕಡತ/ಕಛೇರಿ ಪ್ರತಿ.